O.S.No.8/2022

P.W.:1

ಈ ದಿನ ದಿಃ01.08.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಾದ ಶ್ರೀ ಕೆಬಿಆರ್ ರವರಿಂದಃ-**

ವಾದಿಯಾದ ಶ್ರೀಮತಿ ಮಹದೇವಮ್ಮ ರವರು ನನಗೆ ತಾಯಿಯಾಗಬೇಕು. ನನಗೆ ಈ ದಾವೆಯಲ್ಲಿ ವಾದಿಯು ಸಾಮಾನ್ಯ ಅಧಿಕಾರ ಪತ್ರ ಬರೆದುಕೊಟ್ಟಿದ್ದು, ನಾನು ವಾದಿಯ ಪರವಾಗಿ ಸಾಕ್ಷ್ಯ ನುಡಿಯಲು ಬಂದಿದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ನಾನು ನನ್ನ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳನ್ನು ನಾನು ನನ್ನ ವಕೀಲರಿಗೆ ಹೇಳಿ, ಬರೆಯಿಸಿ, ಓದಿಸಿ ತಿಳಿದುಕೊಂಡು ಮನಗೊಂಡ ನಂತರ ಸಹಿ ಮಾಡಿರುತ್ತೇನೆ. ನನ್ನ ಪ್ರಮಾಣಪತ್ರದಲ್ಲಿರುವ ಎಲ್ಲಾ ವಿಷಯಗಳು ನಿಜ ಮತ್ತು ಸತ್ಯಸಂಗತಿಗಳಾಗಿರುತ್ತವೆ.

ವಾದಿ ನನಗೆ ಬರೆದುಕೊಟ್ಟ ಸಾಮಾನ್ಯ ಅಧಿಕಾರ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ಚಾಪಕಾಗದದ ಮೇಲೆ ನನ್ನ ತಾಯಿಯಾದ ವಾದಿಯು ದೃಢೀಕರಿಸಿ ಪ್ರಮಾಣೀಕರಿಸಿರುವ ನಮ್ಮ ಕುಟುಂಬದ ವಂಶವೃಕ್ಷವನ್ನು ಹಾಜರುಪಡಿಸಿದ್ದೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಸರ್ವೆ ನಂ.128/1ಎ ಜಮೀನಿಗೆ ಸಂಬಂಧಿಸಿದಂತೆ 2002-2003 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು.

ಸರ್ವೆ ನಂ.128/1ಎ ಜಮೀನಿಗೆ ಸಂಬಂಧಿಸಿದಂತೆ 2004-2005 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು.

ಸರ್ವೆ ನಂ.128/1ಎ ಜಮೀನಿಗೆ ಸಂಬಂಧಿಸಿದಂತೆ 2011-2012 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಸರ್ವೆ ನಂ.128/1ಎ ಜಮೀನಿಗೆ ಸಂಬಂಧಿಸಿದಂತೆ 2014-2015 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

ಸರ್ವೆ ನಂ.128/1ಎ ಜಮೀನಿಗೆ ಸಂಬಂಧಿಸಿದಂತೆ 2018-2019 ನೇ ಸಾಲಿನ ಒಂದು ಪಹಣಿ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದು, ಆಲಿಸಿ ಕಾಲಾವಕಾಶ ನೀಡಲಾಯಿತು.

O.S.No.8/2022
P.W.:1

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**